ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016–17 ಮತ್ತು 2017–18ನೇ ಸಾಲಿನ ಆಯವ್ಯಯದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರಿಸಲ್ಪಟ್ಟ ಹಾಗೂ 110 ಹಳ್ಳಿಗಳ ಸಮಗ್ರ ಅಭಿವೃದ್ಧಿಗೆ ಮೀಸಲಿರಿಸಿರುವ ಅನುದಾನದ ಪೈಕಿ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಯಲ್ಲಿ ಕೈಗೊಳ್ಳುವ (1) Providing and fixing furniture and interior works to Mini Vidhana Soudha at Yelahanka In ward no.01. (2) Construction of additional floor over existing Samudaya Bhavan near Venugopal Swamy Temple in ward no.02. ಪ್ಯಾಕೇಜ್–6ರ ಒಟ್ಟು 02 ಕಾಮಗಾರಿಗಳಿಗೆ ಆಡಳಿತಾತ್ಮಕ ಹಾಗೂ ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ–1), ದಿನಾಂಕ: 21–06–2016.
2. ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್‌ಎಫ್‌ಸಿ 2016, ದಿನಾಂಕ: 20–04–2017.
3. ಆಯುಕ್ತರು, ಬಿ.ಬಿ.ಎಂ.ಪಿ. ಪತ್ರ ಸಂಖ್ಯೆ: ಆಯುಕ್ತರು/ಪಿಆರ್/8652/2017–18, ದಿನಾಂಕ: 09–03–2018.
4. ದಿನಾಂಕ: 23–03–2018 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 21–06–2016ರ ಆದೇಶದ ಅನುಬಂಧ–II ರಲ್ಲಿ ಕ್ರಮ ಸಂಖ್ಯೆ: 04 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಹಿಂದಿನ 07 ಸಿ.ಎಂ.ಸಿ. ಮತ್ತು 01 ಟಿ.ಎಂ.ಸಿ. ಪ್ರದೇಶಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ರೂ.250.00 ಕೋಟಿಗಳ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 20–04–2017ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಪ್ರಸ್ತಾವನೆಯನ್ವಯ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು 15 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ವಯ ಅನುಮೋದನೆಯನ್ನು ನೀಡಲಾಗಿರುತ್ತದೆ.

3. ಮೇಲೆ (3) ರಲ್ಲಿ ಓದಲಾದ ದಿನಾಂಕ: 09–03–2018ರ ಪ್ರಸ್ತಾವನೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು 2016–17 ಮತ್ತು 2017–18ನೇ ಸಾಲಿನಲ್ಲಿ ಬಿ.ಬಿ.ಎಂ.ಪಿ.ಗೆ ಹೊಸದಾಗಿ ಸೇರ್ಪಡೆಗೊಂಡ 07 ನಗರ ಸಭೆ 1 ಪುರಸಭೆ ಮತ್ತು 110 ಹಳ್ಳಿಗಳ ಪ್ರದೇಶದ ಸಮಗ್ರ ಅಭಿವೃದ್ಧಿ ಯೋಜನೆಯಡಿಯಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್‌ಎಫ್‌ಸಿ 2016, ದಿನಾಂಕ: 20–04–2017 ರಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ

. . . 2 .

ಕಾಮಗಾರಿಗಳನ್ನು ಕೈಗೊಳ್ಳಲು ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು 15 ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: (5) ರಲ್ಲಿ "Providing and fixing furniture and interior works to Mini Vidhana Soudha at Yelahanka In ward no.01" ರ ಕಾಮಗಾರಿಗೆ ರೂ.100.00 ಲಕ್ಷಗಳು ಮತ್ತು ಕ್ರಮ ಸಂಖ್ಯೆ: (8) ರಲ್ಲಿ "Construction of additional floor over existing Samudaya Bhavan near Venugopal Swamy Temple in ward No.02" ರ ಕಾಮಗಾರಿಗೆ ರೂ.70.00 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು, ಪ್ಯಾಕೇಜ್-6ರ ಕಾಮಗಾರಿಗೆ ಯಲಹಂಕ ವಲಯದ ಯೋಜನಾ ವಿಭಾಗದ ಕಚೇರಿಯಿಂದ ದಿನಾಂಕ: 28-08-2017 ರಂದು ದ್ವಿಲಕೋಟೆ ಇ-ಪ್ರಕ್ಯೂರ್‌ಮೆಂಟ್ ಪದ್ದತಿಯಂತೆ ರೂ.168.68 ಲಕ್ಷಗಳಿಗೆ ಟೆಂಡರ್ ಆಹ್ವಾನಿಸಲಾಗಿರುತ್ತದೆ.

4. ಸದರಿ ಪ್ಯಾಕೇಜ್-6ರ ಕಾಮಗಾರಿಗಳ ತಾಂತ್ರಿಕ ಬಿಡ್‌ಅನ್ನು ದಿನಾಂಕ: 25-09-2017 ರಂದು ತೆರೆಯಲಾಗಿದ್ದು, ಟೆಂಡರ್‌ನಲ್ಲಿ ಇಬ್ಬರು ಗುತ್ತಿಗೆದಾರರಾದ (1) ಶ್ರೀ ಡಿ.ಕೆ. ನಾಗರಾಜ್ ಮತ್ತು (2) ಶ್ರೀ ಕೆ. ಗೋಪಿರೆಡ್ಡಿ ಇವರುಗಳು ಭಾಗವಹಿಸಿದ್ದು, ಸದರಿಯವರು ಸಲ್ಲಿಸಿರುವ ಬಿಡ್‌ಗಳು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ಸದರಿಯವರ ತಾಂತ್ರಿಕ ಬಿಡ್‌ನ್ನು ಅಂಗೀಕರಿಸಿ, ಆರ್ಥಿಕ ಬಿಡ್‌ನ್ನು ತೆರೆಯಲು ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಸದರಿ ಸಭೆಯ ನಿರ್ಣಯದಂತೆ ತಾಂತ್ರಿಕವಾಗಿ ಅರ್ಹರಾದ ಗುತ್ತಿಗೆದಾರರ ಆರ್ಥಿಕ ಬಿಡ್‌ಗಳನ್ನು ದಿನಾಂಕ: 09-01-2018 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ.

ಕ್ರ ಸಂ	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ
1	ಶ್ರೀ ಡಿ.ಕೆ. ನಾಗರಾಜ್	170.00	1,68,68,451.80	1,97,55,141.47	ಶೇ.17.11% ರಷ್ಟು ಹೆಚ್ಚು (ಎಲ್-1)
2	ಶ್ರೀ ಕೆ. ಗೋಪಿರೆಡ್ಡಿ			2,02,42,293.06	ಶೇ.20.00% ರಷ್ಟು ಹೆಚ್ಚು (ಎಲ್-2)

5. ಮೇಲ್ಕಂಡ ಪ್ಯಾಕೇಜ್-6ರ ಕಾಮಗಾರಿಗಳಿಗೆ ಎಲ್-1 ಗುತ್ತಿಗೆದಾರರಾದ ಶ್ರೀ ಡಿ.ಕೆ. ನಾಗರಾಜ್ ರವರು ರೂ.1,97,55,141.47/- ಗಳನ್ನು ನಮೂದಿಸಿದ್ದು, ಈ ಮೊತ್ತವನ್ನು 2016-17ನೇ ಸಾಲಿನ ಲೋಕೋಪಯೋಗಿ ಇಲಾಖೆಯ ದರಪಟ್ಟಿಯ ದರಗಳಿಗೆ ಹೋಲಿಸಿದಾಗ ಶೇ.17.11% ರಷ್ಟು ಹೆಚ್ಚು ಇದ್ದು, ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ಮೌಲ್ಯಮಾಪನ/ದರಸಂಧಾನ ಸಮಿತಿಯ ಸಭೆಯಲ್ಲಿ ಗುತ್ತಿಗೆದಾರರೊಂದಿಗೆ ದರಸಂಧಾನ ನಡೆಸಿದ್ದು, ಸದರಿಯವರು ಶೇ.12% ರಷ್ಟು ಕಡಿಮೆ ಮಾಡಲು ಒಪ್ಪಿದ್ದು, ಕಾಮಗಾರಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಹಾಗೂ ಗುತ್ತಿಗೆದಾರರು ನಮೂದಿಸಿರುವ ಟೆಂಡರ್‌ಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

6. ಮೇಲೆ (4) ರಲ್ಲಿ ಓದಲಾದ ದಿನಾಂಕ: 23-03-2018 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ನಿರ್ಣಯಿಸಿದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 246 ಎಂಎನ್‌ವೈ 2018,
ಬೆಂಗಳೂರು, ದಿನಾಂಕ: 03-09-2018.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2016-17 ಮತ್ತು 2017-18ನೇ ಸಾಲಿನ ಆಯವ್ಯಯದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರಿಸಲ್ಪಟ್ಟ ಹಾಗೂ 110 ಹಳ್ಳಿಗಳ ಸಮಗ್ರ ಅಭಿವೃದ್ಧಿಗೆ ಮೀಸಲಿರಿಸಿರುವ ಅನುದಾನದ ಪೈಕಿ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಯಲ್ಲಿ ಕೈಗೊಳ್ಳುವ (1) Providing and fixing furniture and interior works to Mini Vidhana Soudha at Yelahanka In ward No.01. (2) Construction of additional floor over existing Samudaya Bhavan near Venugopal Swamy Temple in ward No.02. ಪ್ಯಾಕೇಜ್-6ರ ಒಟ್ಟು 02 ಕಾಮಗಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 175 ಎಸ್‌ಎಫ್‌ಸಿ 2016, ದಿನಾಂಕ: 20-04-2017ರ ಆದೇಶದ ಕ್ರಮ ಸಂಖ್ಯೆ: (5) ಮತ್ತು (8) ರಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅಂದಾಜು ಮೊತ್ತ ರೂ.1.70 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಎಲ್-1 ಗುತ್ತಿಗೆದಾರರಾದ ಶ್ರೀ ಡಿ.ಕೆ. ನಾಗರಾಜ್ ರವರು ಸಂದಾನದ ನಂತರ ನಮೂದಿಸಿರುವ ಅಂತಿಮ ಮೊತ್ತ ರೂ.1.839 ಕೋಟಿಗಳು, ಟೆಂಡರ್‌ಗಿಟ್ಟ ಮೊತ್ತ ಹಾಗೂ 2016-17ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇ.9% ರಷ್ಟು ಹೆಚ್ಚಿನ ದರಗಳಿಗೆ ಮಿತಿಗೊಳಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಿದೆ.

1. ಮೇಲಿನ ಸಮುದಾಯ ಭವನವನ್ನು ನಿರ್ಮಿಸುವ ಸ್ಥಳವು ಬಿ.ಬಿ.ಎಂ.ಪಿ.ಯ ಸ್ವತ್ತಾಗಿರುವ ಬಗ್ಗೆ ಖಾತರಿ ಪಡಿಸಿಕೊಂಡು ನಿರ್ಮಾಣ ಮಾಡುವ ಸಮುದಾಯ ಭವನದಿಂದ ಬಿ.ಬಿ.ಎಂ.ಪಿ.ಗೆ ಆದಾಯ ಬರುವಂತೆ ಕ್ರಮ ವಹಿಸಲು ಬಿ.ಬಿ.ಎಂ.ಪಿ. ಆಯುಕ್ತರು ಹಾಗೂ ಯೋಜನೆಗೆ ಸಂಬಂಧಿಸಿದ ಮುಖ್ಯ ಅಭಿಯಂತರರಿಗೆ ಸೂಚಿಸಿದೆ.
2. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016 ರಲ್ಲಿ 2016-17ನೇ ಸಾಲಿನಲ್ಲಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು. ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಮೊತ್ತವನ್ನು ಪಾಲಿಕೆಯು ತನ್ನ ಸ್ವಂತ ನಿಧಿಯಿಂದಲೇ ಭರಿಸತಕ್ಕದ್ದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

...4.

5. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೂ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.

6. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

7. ದಿನಾಂಕ: 23-03-2018ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಎನ್. ಪ್ರಭಾಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
13. ಅಧೀಕ್ಷಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ತ|೧|೨೦೧೮